ಗಮನಕ್ಕೆ

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1555
ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 24.09.2021

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ. | ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸಬೇಕಾಗಿದೆ; ಈ ಬಗ್ಗೆ ಸರ್ವೆ ಮಾಡಲಾಗಿದೆಯೇ; ಯಾವಾಗ ಬಸ್ ಸೌಲಭ್ಯ ಕಲ್ಪಿಸಲಾಗುವುದು; | ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 1225 ಹಳ್ಳಿಗಳಿದ್ದು ಎಲ್ಲಾ ಹಳ್ಳಿಗಳಿಗೂ ಕರಾರಸಾ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಒದಗಿಸಲಾಗಿರುತ್ತದೆ. ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 582 ಹಳ್ಳಿಗಳಿದ್ದು, 581 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.<br><br>ಉಳಿದ 1 ಹಳ್ಳಿಗೆ (ಬೇಡಗುಳಿ) ನಿಗಮದ ವತಿಯಿಂದ ಸರ್ವೆ ಮಾಡಲಾಗಿದ್ದು, ಸದರಿ ಗ್ರಾಮದ ರಸ್ತೆ ಕಿರಿದಾಗಿರುವುದರಿಂದ ಭಾರಿ ವಾಹನ ಸಂಚರಿಸಲು ಯೋಗ್ಯ ರಸ್ತೆ ಇಲ್ಲದ ಕಾರಣದಿಂದಾಗಿ ಸಾರಿಗೆ ಸೌಲಭ್ಯ ಕಲ್ಪಿಸಲು ಸಾಧ್ಯವಾಗಿರುವುದಿಲ್ಲ.<br><br>ಆದರೆ ಚಾಮರಾಜನಗರದಿಂದ ಬೇಡನಗುಳಿಗೆ ಒಂದು ಖಾಸಗಿ ಮಿನಿ ಬಸ್ 2 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡುತ್ತಿದೆ. |
| ಆ. | ಬಸ್ ಸೌಲಭ್ಯವಿಲ್ಲದೆ ಶಾಲಾ ಮಕ್ಕಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುವುದರಿಂದ ಈ ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸಲಾಗುವುದು ಯಾವಾಗ; | ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಬೇಡಗುಳಿ ಗ್ರಾಮದ ರಸ್ತೆ ದುರಸ್ಥಿಯಾದ ನಂತರ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು. |
| ಇ. | ಪ್ರಸಕ್ತ ವರ್ಷದಲ್ಲಿ ಎಷ್ಟು ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸುವ ಉದ್ದೇಶವಿದೆ? ಎಷ್ಟು ದಿನಗಳಲ್ಲಿ ಬಸ್ ಸೌಲಭ್ಯವನ್ನು ಕಲ್ಪಿಸಲಾಗುವುದು | ಪ್ರಸಕ್ತ ವರ್ಷದಲ್ಲಿ ಬೇಡಗುಳಿ ಗ್ರಾಮಕ್ಕೆ ಸಾರಿಗೆ ಸೌಲಭ್ಯ ಒದಗಿಸುವ ಉದ್ದೇಶವಿದೆ. ನಿಗಮದ ವತಿಯಿಂದ ಗ್ರಾಮೀಣ ಅಭಿವೃದ್ಧಿ ಮತ್ತು |

| | | |
|---|---|---|
| | | ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ ಮತ್ತೊಮ್ಮೆ ಸರ್ವೆ ಕಾರ್ಯ ನಡೆಸಿ ರಸ್ತೆ ದುರಸ್ತಿಯಾದ ನಂತರ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು. |

ಸಂಖ್ಯೆ: ಟಿಡಿ 229 ಟಿಸಿಕ್ಯೂ 2021

**(ಬಿ.ಶ್ರೀರಾಮುಲು)**
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು